ಜನರು ಮಸೀದಿಗಳ ಬಗ್ಗೆ ಜಂಭ ಕೊಚ್ಚಿಕೊಳ್ಳುವವರೆಗೆ ಘಳಿಗೆಯು (ಪುನರುತ್ಥಾನ) ಸಂಭವಿಸುವುದಿಲ್ಲ

ಅನಸ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ: ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಜನರು ಮಸೀದಿಗಳ ಬಗ್ಗೆ ಜಂಭ ಕೊಚ್ಚಿಕೊಳ್ಳುವವರೆಗೆ ಘಳಿಗೆಯು (ಪುನರುತ್ಥಾನ) ಸಂಭವಿಸುವುದಿಲ್ಲ". [صحيح] [رواه أبو داود والنسائي وابن ماجه]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ತಿಳಿಸುವುದೇನೆಂದರೆ, ಜನರು ತಮ್ಮ ಮಸೀದಿಗಳ ಅಲಂಕಾರದ ಬಗ್ಗೆ ಜಂಭಕೊಚ್ಚಿಕೊಳ್ಳುವುದು, ಅಥವಾ ಕೇವಲ ಅಲ್ಲಾಹನ ಸ್ಮರಣೆಗಾಗಿ ನಿರ್ಮಿಸಲಾದ ಮಸೀದಿಗಳೊಳಗೆ ತಮ್ಮ ಲೌಕಿಕ ವಿಷಯಗಳ ಬಗ್ಗೆ ಹೆಮ್ಮೆಪಡುವುದು ಪುನರುತ್ಥಾನ ದಿನ ಸಮೀಪಿಸುವುದರ ಮತ್ತು ಈ ಪ್ರಪಂಚವು ಅಂತ್ಯಗೊಳ್ಳುವುದರ ಸಂಕೇತಗಳಲ್ಲಿ ಒಂದಾಗಿದೆ.

http://sunnah.global/hadeeth/kn/show/10897